**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯರ ಖಾಸಗಿ ಪ್ರಾಕ್ಟೀಸ್ ಕುರಿತು ಸರ್ಕಾರದ ನಿಲುವು ಮತ್ತು ಕೈಗೊಂಡಿರುವ ಕ್ರಮಗಳ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-**

ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಆದೇಶಗಳ ಪ್ರಕಾರ ಸರ್ಕಾರಿ ವೈದ್ಯರಿಗೆ ಖಾಸಗಿ ಸೇವೆ ನೀಡಲು ಕೆಲವು ಮಟ್ಟಿಗೆ ಅನುಮತಿ ನೀಡಲಾಗಿದ್ದರೂ, ಅವರ ನಿಯಮಿತ ಸರ್ಕಾರಿ ಕರ್ತವ್ಯಗಳಿಗೆ ಯಾವುದೇ ರೀತಿಯ ಅಡ್ಡಿ ಉಂಟಾಗಬಾರದು ಎಂಬುದು ಸರ್ಕಾರದ ಸ್ಪಷ್ಟ ನಿಲುವಾಗಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ ನಿರಂತರ ಆರೈಕೆ, ತುರ್ತು ಚಿಕಿತ್ಸೆಗಳು ಮತ್ತು ನಿಯಮಿತ ಮೇಲ್ವಿಚಾರಣೆ ಅತ್ಯಂತ ಅವಶ್ಯಕವಾಗಿದೆ. ಸರ್ಕಾರಿ ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿ ಒಳರೋಗಿ ಚಿಕಿತ್ಸೆಯಲ್ಲಿ ತೊಡಗುವುದರಿಂದ ಸರ್ಕಾರಿ ಆಸ್ಪತ್ರೆಗಳ ಸೇವಾ ಗುಣಮಟ್ಟ ಕುಸಿಯುವ ಸಾಧ್ಯತೆಗಳಿದ್ದು, ರೋಗಿಗಳ ಆರೈಕೆಯಲ್ಲಿ ನಿರ್ಲಕ್ಷ್ಯ ಉಂಟಾದ ಹಲವು ನಿದರ್ಶನಗಳು ಸರ್ಕಾರದ ಗಮನಕ್ಕೆ ಬಂದಿವೆ. ಕೆಲವು ಪ್ರಕರಣಗಳಲ್ಲಿ ಗಂಭೀರ ಪರಿಣಾಮಗಳು ಉಂಟಾಗಿವೆ.

ಈ ವಿಷಯವಾಗಿ ಮಾನ್ಯ ಲೋಕಾಯುಕ್ತರು ಹಲವಾರು ಸಂದರ್ಭಗಳಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದು, ಕರ್ನಾಟಕ ಆಡಳಿತ ಸುಧಾರಣಾ ಆಯೋಗವು ತನ್ನ ವರದಿಯಲ್ಲಿ ಸಾರ್ವಜನಿಕ ಸೇವೆಗೆ ಆದ್ಯತೆ ನೀಡುವ ಉದ್ದೇಶದಿಂದ ಸರ್ಕಾರಿ ವೈದ್ಯರ ಖಾಸಗಿ ಅಭ್ಯಾಸವನ್ನು ನಿಯಂತ್ರಿಸಲು ಶಿಫಾರಸ್ಸು ಮಾಡಿರುತ್ತಾರೆ. ಕೇರಳ ರಾಜ್ಯ ಸೇರಿದಂತೆ ಇತರ ರಾಜ್ಯಗಳಲ್ಲಿಯೂ ಕಟ್ಟುನಿಟ್ಟಿನ ನಿಯಮಾವಳಿಗಳು ಜಾರಿಯಲ್ಲಿದ್ದು, ಖಾಸಗಿ ಸೇವೆಯನ್ನು ಸೀಮಿತಗೊಳಿಸಲಾಗಿದೆ.

**ಈ ಹಿನ್ನೆಲೆಯಲ್ಲಿ ಸರ್ಕಾರವು ಗಂಭೀರವಾಗಿ ಪರಿಶೀಲಿಸಿ ಸಾರ್ವಜನಿಕರ ಆರೋಗ್ಯ ರಕ್ಷಣೆ ಮತ್ತು ಸರ್ಕಾರಿ ಆಸ್ಪತ್ರೆಗಳ ಸೇವಾ ಗುಣಮಟ್ಟವನ್ನು ಇನ್ನಷ್ಟು ಬಲಪಡಿಸುವುದು ಸರ್ಕಾರದ ಪ್ರಥಮ ಆದ್ಯತೆಯಾಗಿರುವುದರಿಂದ,**

1. ಸರ್ಕಾರಿ ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ (IPD) ಚಿಕಿತ್ಸೆ ನೀಡುವುದು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.
2. ನಿಯಮಿತ ಸರ್ಕಾರಿ ಕರ್ತವ್ಯಗಳ ಅವಧಿಯ ನಂತರ ಮತ್ತು ಕರ್ತವ್ಯಗಳಿಗೆ ಅಡ್ಡಿಯಾಗದಂತೆ ಹೊರರೋಗಿ ವಿಭಾಗದಲ್ಲಿ (OPD) ಮಾತ್ರ ಖಾಸಗಿ ಕ್ಲಿನಿಕ್ ಅಥವಾ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಲು ಅನುಮತಿಸಿದೆ.
3. ಈ ಖಾಸಗಿ ಸೇವೆಯ ಸಂಪೂರ್ಣ ವಿವರಗಳನ್ನು ಸರ್ಕಾರಕ್ಕೆ ಕಡ್ಡಾಯವಾಗಿ ಘೋಷಿಸಬೇಕು.

ಈ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ಸಂಬಂಧಪಟ್ಟ ಸರ್ಕಾರಿ ವೈದ್ಯರ ವಿರುದ್ಧ ಕಾನೂನಿನಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಹಾಗೂ ಕರ್ನಾಟಕ ನಾಗರಿಕ ಸೇವಾ ನಿಯಮಗಳ ಪ್ರಕಾರ ಶಿಸ್ತು ಕ್ರಮ ಜರುಗಿಸಲು ಸೂಚಿಸಿದೆ.

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು